

ಪರ್ವತಗಳ ತೆಕ್ಕೆಯಲ್ಲಿ ವಿರಮಿಸುತ್ತಿರುವ ನೊರ್ಡ್ ಫ್ಯೋರ್ಡ್

# ಸಾಗರ ತಡಿಯಿಂದ ನೀರ್ಗಲ್ಲ ನದಿಗೆ



ಕ್ಲೇಯ್ವುಫಾಸ್ಸೇನ್ ಜಲಪಾತ

■ **ರಾಮಶರಣ ಲಕ್ಷ್ಮೀನಾರಾಯಣ**

ಭೂಮಿಯನ್ನು ಮುಟ್ಟುವ ತವಕದಲ್ಲಿ ಪರ್ವತಗಳ ಸಾಲನ್ನು ಸರಿಸುತ್ತ ಅಲ್ಲಲ್ಲಿ ದ್ವೀಪಗಳನ್ನು ನಿರ್ಮಿಸಿ, ಒಳನುಗ್ಗುವ ಸಾಗರ; ಪ್ರಿಯಕರನಾದ ಸಾಗರವನ್ನು ಭೂಮಿ ತನ್ನ ಅಗಾಧ ಬಾಹುಗಳಿಂದ ಅಪ್ಪಿ ವಿರಮಿಸುವ ಜಾಗವೇ ನಾರ್ವೆ ದೇಶದ ಫ್ಯೋರ್ಡ್ (fjord)ಗಳು. ಇಲ್ಲಿ ಸಾಗರಕ್ಕೆ ರೋಷವಿಲ್ಲ, ಸಾಗರದೊಂದಿಗೆ ಗುದ್ದಾಡಲು ದಡದಲ್ಲಿ ಬಂಡೆಗಳಿಲ್ಲ. ಅಲೆಗಳ ಅಬ್ಬರವಿಲ್ಲದೆ, ಸಾಗರ ಭೂಮಿಗಳೆರಡೂ ಸಂತೃಪ್ತರಾಗಿ ಒಂದರ ತೋಳಲ್ಲೊಂದು ಒರಗಿ ವಿಶ್ರಮಿಸುತ್ತಿವೆಯೋ ಎಂಬ ಭಾವನೆ ಬರುವುದು ಸಹಜ. ಜೋಗುಳ ಹಾಡುವ ಗಾಳಿ, ಹೊದಿಕೆ ಹೊದಿಸಲು ಶ್ರಮಿಸುತ್ತಿರುವ ಮೋಡಗಳು ತಾವೂ ಈ ಸಮಾಗಮದ ಸಂಭ್ರಮದಲ್ಲಿ ಪಾಲ್ಗೊಳ್ಳುತ್ತವೆ.

ಇಂತಹ ಸುಂದರ, ಶುಭ್ರ ನಸುಕಿನಲ್ಲಿ, ಕಣ್ಣು ಹಾಯಿಸಿದಷ್ಟೂ ದೂರಕ್ಕೆ ಎರಡೂ ಕಡೆ ಮಲಗಿದ್ದ ಪರ್ವತ ಸಾಲುಗಳ ನಡುವೆ ಬೆರಳಿನಂತೆ ಚಾಚಿದ್ದ ಸಾಗರದಲ್ಲಿ 19 ಅಂತಸ್ತುಗಳಿದ್ದರೂ ಅಲ್ಲಾಡದೇ ಹಂಸದಂತೆ ಗಂಭೀರವಾಗಿ ಭೂಮಿ– ಸಾಗರಗಳ ವಿರಾಮಕ್ಕೆ ಚ್ಯುತಿಯಾದೀತೇನೋ ಎಂಬಂತೆ ಮೆಲ್ಲನೆ ಮುಂದಡಿಯಿಡುತ್ತಿತ್ತು ನಾವು ಸಾಗುತ್ತಿದ್ದ ಹಡಗು.

ನಾರ್ವೆ ಫ್ಯೋರ್ಡ್ ಯಾನದ ಒಂದು ವಿಶ್ರಾಮ ಸ್ಥಳ ಓಲ್ಡೆನ್ ಎಂಬ ಗ್ರಾಮ. ಓಲ್ಡೀಲ್ವ ನದಿ ಹಾಗೂ ನೋರ್ಡ್ ಫ್ಯೋರ್ಡ್‌ಗಳ ಸಂಗಮ ಸ್ಥಳ ಇದು. ಕೆಲವೇ ನೂರು ಜನರಿರುವ ಈ ಗ್ರಾಮಕ್ಕೆ ಸುಮಾರು 3 ಲಕ್ಷ ಜನ ಬೇಸಿಗೆಯಲ್ಲಿ ಅಡಿ ಇಡುತ್ತಾರೆ. ಇಲ್ಲಿನ ಮುಖ್ಯ ಆಕರ್ಷಣೆ ಹತ್ತಿರದ ಬಕ್ಸ್ಡಾಲ್ಸ್ ಬ್ರೀನ್ (Briksdalsbreen) ಎಂಬ ಹಿಮನದಿ. ಓಲ್ಡೆನ್ ಗ್ರಾಮದಿಂದ ಈ ಹಿಮನದಿಯ ತಪ್ಪಲು ಕೇವಲ 25 ಕಿ.ಮೀ. ದೂರದಲ್ಲಿದೆ. ಹಿಮನದಿಗೆ ಹೋಗಲು ಓಲ್ಡೆನ್ ಬಂದರಿನಿಂದ ಖಾಸಗಿ ಬಸ್ಸುಗಳ ವ್ಯವಸ್ಥೆಯಿದೆ. ಪರ್ವತಗಳ ಮಗ್ಗುಲಿನಲ್ಲಿ ಸಾಗುವ ಹಾದಿ ಹಚ್ಚಹಸಿರಿನ